ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 2ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 11.00 ಗಂಟೆಗೆ)

1. ಸಂತಾಪ ಸೂಚನೆ

2. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2020ರ ಫೆಬ್ರವರಿ 17 ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 18ನೇ ಫೆಬ್ರವರಿ 2020 ರಂದು ಶ್ರೀ ಎ.ಎಸ್. ಪಾಟೀಲ್ (ನಡಹಳ್ಳಿ) ರವರು ಸೂಚಿಸಿ, ಶ್ರೀ ಹೆಚ್. ಹಾಲಪ್ಪ ಹರತಾಳ್ ರವರು ಅನುಮೋದಿಸಿರುವ ಪ್ರಸ್ತಾವದ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

3. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

... 2/ ..

3. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ತಿದ್ದುಪಡಿ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ರೇಸ್ ಕೋರ್ಸುಗಳಿಗೆ ಪರವಾನಗಿ ನೀಡುವ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5. ಡಾ. ಅಶ್ವತ್ಥ್ ನಾರಾಯಣ ಸಿ.ಎನ್. (ಮಾನ್ಯ ಉಪ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

6. ಡಾ. ಅಶ್ವತ್ಥ್ ನಾರಾಯಣ ಸಿ.ಎನ್. (ಮಾನ್ಯ ಉಪ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಉನ್ನತ ಶೈಕ್ಷಣಿಕ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ ಮತ್ತು ನಿವೃತ್ತಿ ವೇತನದ ನಿಯಂತ್ರಣ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

7. ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

8. ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2020ನೇ ಸಾಲಿನ ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

... 3/ ..

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಬಂಡೆಪ್ಪ ಖಾಶೆಂಪೂರ, ಪ್ರಿಯಾಂಕ ಖರ್ಗೆ ಹಾಗೂ ಎಂ.ವೈ. ಪಾಟೀಲ ಇವರುಗಳು** – ತೊಗರಿಯನ್ನು ಬೆಂಬಲ ಬೆಲೆಯಲ್ಲಿ ರೈತರಿಂದ ಖರೀದಿ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಡಾ. ಕೆ. ಅನ್ನದಾನಿ, ಪ್ರಿಯಾಂಕ ಖರ್ಗೆ, ನರಸಿಂಹನಾಯಕ್ (ರಾಜುಗೌಡ), ಗೂಳಿಹಟ್ಟಿ ಡಿ. ಶೇಖರ್, ಎನ್. ಮಹೇಶ್ ಹಾಗೂ ಇತರರು** – ಬೆಳಗಾವಿ ಜಿಲ್ಲೆಯ ಗೋಕಾಕ ಹಾಗೂ ಮೂಡಲಗಿ ತಾಲ್ಲೂಕುಗಳಲ್ಲಿ ಪರಿಶಿಷ್ಟ ಜಾತಿಗೆ ಸೇರದ ಇತರೆ ವರ್ಗದವರಿಗೆ ಸುಳ್ಳು ಜಾತಿ ಪ್ರಮಾಣಪತ್ರವನ್ನು ನೀಡಿರುವ ಅಧಿಕಾರಿಗಳ ಹಾಗೂ ಪ್ರಮಾಣಪತ್ರವನ್ನು ಪಡೆದಿರುವವರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಕಿತ್ತೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವೀರಾಪುರ ಮತ್ತು ಅಮರಾಪುರ ಗ್ರಾಮಗಳನ್ನು ಸೇರಿಸಿ ಪ್ರತ್ಯೇಕ ಗ್ರಾಮ ಪಂಚಾಯಿತಿಯನ್ನು ರಚಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

2) **ಶ್ರೀ ಭರತ್ ಶೆಟ್ಟಿ ವೈ ಅವರು** – ದಕ್ಷಿಣ ಕನ್ನಡ ಜಿಲ್ಲೆಯ ಸರ್ಕಾರಿ ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿಗೆ ಕ್ಷೇತ್ರವಾರು ಅನುದಾನವನ್ನು ಬಿಡುಗಡೆ ಮಾಡಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

3) **ಶ್ರೀ ಹೆಚ್.ಕೆ. ಪಾಟೀಲ್, ಅರಗ ಜ್ಞಾನೇಂದ್ರ, ನೆಹರು ಚ. ಓಲೇಕಾರ್, ಕೆ. ರಘುಪತಿ ಭಟ್, ಲಾಲಾಜಿ ಆರ್. ಮೆಂಡನ್ ಹಾಗೂ ಇತರರು** – 2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್‌ಗಳ ನೇಮಕಾತಿಯಲ್ಲಿ ಆದ ವಿಳಂಬ, ಕರ್ನಾಟಕ ಆಡಳಿತ ಮಂಡಳಿಯ ಆದೇಶ, ಸಚಿವ ಸಂಪುಟ ಸಭೆಯ ನಿರ್ಣಯ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಕ್ಕೆ ಅನುಗುಣವಾಗಿ ಅಡ್ವೋಕೇಟ್ ಜನರಲ್ ಅವರು ನೀಡಿರುವ ಅಭಿಪ್ರಾಯಗಳ ದಾಖಲೆಗಳ ಅನುಸಾರ ಸದರಿ ಪ್ರಕರಣದಲ್ಲಿ ಸಂವಿಧಾನದ ಅನುಚ್ಛೇದ 323(2)ರ ಉಲ್ಲಂಘನೆಯಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

4) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ವಿವಿಧ ಕಾಮಗಾರಿಗಳಿಗಾಗಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡಾಗ ರೈತರಿಗೆ ಪರಿಹಾರದ ಜೊತೆಗೆ ಅದೇ ತಾಲ್ಲೂಕಿನಲ್ಲಿ ಸರ್ಕಾರಿ ಭೂಮಿಯನ್ನು ಪರ್ಯಾಯವಾಗಿ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ವಿ. ಮುನಿಯಪ್ಪ ಅವರು** – ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗಾಗಿ ಕೊರೆದಿರುವ ಕೊಳವೆ ಬಾವಿಗಳಿಗೆ ಮೋಟಾರ್ ಅಳವಡಿಸಿ, ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm